ವಿಷಯ:- ತಾಜ್ ಗುಂಪಿನವರಿಂದ ನಾಗರಹೊಳೆಯಲ್ಲಿ ಅರಣ್ಯ ವಿಹಾರಧಾಮ ನಿರ್ಮಾಣ.

6(162)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ತಾಜ್ ಗುಂಪಿನವರಿಗೆ ನಾಗರಹೊಳೆಯಲ್ಲಿ ಅರಣ್ಯ ವಿಹಾರಧಾಮಗಳನ್ನು ಕಟ್ಟಲು ಅನುಮತಿ ನೀಡಲಾಗಿದೆಯೇ;

ಆ) ಇದರಿಂದ ಇಲ್ಲಿನ ಪರಿಸರಕ್ಕೆ ಹಾನಿಯಾಗುವುದಿಲ್ಲವೇ;

ಇ) ತಾಜ್ ಗುಂಪಿನವರು ಅರಣ್ಯ ಸಂರಕ್ಷಣಾ ಕಾನೂನನ್ನು ಈಗಾಗಲೆ ಉಲ್ಲಂಘಿಸಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿರುವುದು ನಿಜವೇ;

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು):-

ಅ) ಇಲ್ಲ.

ಆ) ಇಲ್ಲ.

ಇ) ತಾಜ್ ಗುಂಪಿನವರು ಅರಣ್ಯ ಸಂರಕ್ಷಣಾ ಕಾನೂನನ್ನು ಉಲ್ಲಂಘನೆ ಮಾಡಿರುವುದಿಲ್ಲ.

ಈ) ಸರ್ಕಾರದವರು ಕ್ರಮ ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ವಿವಿಧ ಶ್ರೇಣಿಯ ಸರ್ಕಾರಿ ಆಸ್ಪತ್ರೆಗಳ ಬಗ್ಗೆ.

7(41)

ಶ್ರೀ ಡಿ.ಆರ್. ಪಾಟೀಲ್ (ಗದಗ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ವಿವಿಧ ಶ್ರೇಣಿಯ ಸರ್ಕಾರಿ ಆಸ್ಪತ್ರೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು).

ಆ) ಈ ಆಸ್ಪತ್ರೆಗಳು ಆಯಾ ಜಿಲ್ಲೆಯ ಜನಸಂಖ್ಯೆಗನುಗುಣವಾಗಿ ಇದೆಯೇ;

ಇ) ಈ ಬಗ್ಗೆ ತಾರತಮ್ಯವಿದ್ದರೆ ಅದನ್ನು ಸರಿಪಡಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-